(ಅನುಬಂಧ–6)

1.ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2007 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ.ಟಿ.ದೇವೇಗೌಡ (ಸಹಕಾರ ಸಚಿವರು):– ಮಾನ್ಯ ಅಧ್ಯಕ್ಷರೆ, 2007ರ ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ ;

"2007 ರ ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜಿ.ಟಿ.ದೇವೇಗೌಡ (ಸಹಕಾರ ಸಚಿವರು):– ಮಾನ್ಯ ಅಧ್ಯಕ್ಷರೆ, 2007 ರ ಚಿಟ್‌ಫಂಡುಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ವಾಟಾಳ್ ನಾಗರಾಜ್:– ಮಾನ್ಯ ಅಧ್ಯಕ್ಷರೆ, ನಮಗೆ ಬಿಲ್ ಕಾಪಿಯನ್ನೇ ಕೊಟ್ಟಿಲ್ಲ. ಹೀಗಿರುವಾಗ ಅದರ ಮೇಲೆ ಚರ್ಚೆ ಹೇಗೆ ಮಾಡುವುದು?

ಶ್ರೀ ಜೆ.ಸಿ.ಮಾಧುಸ್ವಾಮಿ:– ಬಿಲ್ ಕಾಪಿ ಸರ್ಕ್ಯುಲೇಟ್ ಮಾಡಿ.

ಅಧ್ಯಕ್ಷರು:– ಬಿಲ್ ಕಾಪಿ ಸರ್ಕ್ಯುಲೇಟ್ ಮಾಡಿದ್ದೀರೇನಪ್ಪಾ?